ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಶಿಕ್ಷಕರ ಪದೋನ್ನತಿ ಕುರಿತು

ಶ್ರೀ ಅರಣ ಶಹಾಪುರ (ಶಿಕ್ಷಕರ ಕ್ಷೇತ್ರ):-

514(677) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕ್ರೈಸ್‌ನ ಪದವಿಪೂರ್ವ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಖಾಲಿ ಹುದ್ದೆ ಎಷ್ಟು ;

(ಆ) ವಸತಿ ಶಾಲೆಗಳಲ್ಲಿನ ಸಹ ಶಿಕ್ಷಕರುಗಳಿಗೆ ವಸತಿ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಬಡ್ತಿ ನೀಡಲು ಕೈಗೊಂಡ ಕ್ರಮಗಳೇನು; ವಸತಿ ಶಾಲೆಗಳ ಸಹ ಶಿಕ್ಷಕರುಗಳ ವಿಷಯವಾರು ಜೇಷ್ಠತಾ ಪಟ್ಟಿಗಳನ್ನು ಪ್ರಕಟಿಸಲಾಗಿದೆಯೇ; ಯಾವ ಕಾಲ ಮಿತಿಯಲ್ಲಿ ಬಡ್ತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು ;

(ಇ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯ ಮಾಡಿ ಎಲ್ಲಾ ವಸತಿ ಶಾಲೆಗಳನ್ನು ನಿರ್ದೇಶನಾಲಯದಡಿ ತಂದು ಅಭಿವೃದ್ಧಿಪಡಿಸಿದಲ್ಲಿ ವಿದ್ಯಾರ್ಥಿಗಳು ಹಾಗೂ ನೌಕರರಿಗೆ ಅನುಕೂಲವಾಗಲಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ನಿಟ್ಟಿನಲ್ಲಿ ತೆಗೆದುಕೊಂಡ ಕ್ರಮಗಳೇನು ;

(ಈ) ವಸತಿ ಶಾಲೆ ಶಿಕ್ಷಕರಿಗೆ/ನೌಕರರಿಗೆ ಪ್ರಸ್ತುತ ವರ್ಷ ವರ್ಗಾವಣೆ ಅಧಿನಿಯಮದಂತೆ ಕೌನ್ಸಿಲಿಂಗ್ ಮೂಲಕ ಸಾಮಾನ್ಯ ವರ್ಗಾವಣೆ ಮಾಡಲು ತೆಗೆದುಕೊಂಡ ಕ್ರಮಗಳೇನು; ಪ್ರಸ್ತುತ ವರ್ಷ ವರ್ಗಾವಣೆ ನೀಡದಿದ್ದಲ್ಲಿ, ಕಾರಣವೇನು ;

(ಉ) ವಸತಿ ಶಾಲೆಗಳಲ್ಲಿ 2012 ರಿಂದ ನವೆಂಬರ್ 2020 ರವರೆಗೂ ಸೇವೆಯಲ್ಲಿರುವಾಗಲೇ ಮೃತಪಟ್ಟಿರುವ ಖಾಯಂ ನೌಕರರೆಷ್ಟು; ಮೃತಪಟ್ಟ ನೌಕರರ ಕುಟುಂಬಕ್ಕೆ ಸಿಗುವ ಪರಿಹಾರವೆಷ್ಟು; ಅವರಲ್ಲಿ ಎಷ್ಟು ಮೃತ ನೌಕರರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೌಕರಿಯನ್ನು ನೀಡಲಾಗಿದೆ; ಇಲ್ಲವಾದಲ್ಲಿ, ಕಾರಣವೇನು ?